ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಫಿರ್ಯಾದಿದಾರರನ್ನು ದಿನಾಂಕ 20-03-2025 ರಂದು ಪುನಃ ಕರೆದು ಪ್ರಮಾಣ ವಚನ ಮಾಡಿಸಲಾಯಿತು

**ಮುಂದುವರೆದ ಮುಖ್ಯ ವಿಚಾರಣೆ : ಫಿರ್ಯಾದಿದಾರರ ಪರ ಶ್ರೀ. ಎಮ ಕೆ ಎನ ವಕೀಲರಿಂದಃ-**

ಆರೋಪಿಯ ಸಾಲಕ್ಕೆ ಸಂಬಂಧಿಸಿದಂತೆ ಪಾವತಿ ರಶೀದಿ, ಪ್ರೊಮಿಸರಿ ನೋಟನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-7 ಮತ್ತು ನಿಪಿ-8 ಎಂದು, ಸಾಲದ ಅರ್ಜಿ, ಕಬೂಲಾತಿ ಪತ್ರ, ಆಸ್ತಿ ತೋರವತ್ತಿ ಕರಾರು ಪತ್ರ, ಜಮೀನು ಭದ್ರತೆಯ ಸಾಲ ಕಬೂಲಾಯತಿ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-9 ಎಂದು, ಶಿಫಾರಸ್ಸು ಮತ್ತು ಸಂಬಂಧಿಕರ ಒಪ್ಪಿಗೆ ಪತ್ರವನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-10 ಎಂದು, ಸಾಲಗಾರನ ಮತ್ತು ಜಾಮೀನುದಾರರ ಒಪ್ಪಿಗೆ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-11 ಮತ್ತು ನಿಪಿ-12 ಎಂದು ಗುರುತಿಸಲಾಯಿತು.

ಆದ್ದರಿಂದ ಫಿರ್ಯಾದಿಯಲ್ಲಿ ಕೇಳಿದಂತೆ ಆದೇಶ ಮಾಡಬೇಕಾಗಿ ನನ್ನ ಪ್ರಾರ್ಥನೆ.

**ಮುಂದುವರೆದ ಪಾಟೀಸವಾಲುಃ ಆರೋಪಿಯ ಪರ ಶ್ರೀ. ಎಲ ಎಮ ಬಿ ವಕೀಲರಿಂದಃ-**

ವಕೀಲರ ಕೋರಿಕೆಯ ಮೇರೆಗೆ ಪಾಟೀಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ನಿರ್ದೇಶನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇ. ಕೇ. ಸರಿ ಅದೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ. ದಂ., ಬನಹಟ್ಟಿ.**